# pಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 648

ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 12-03-2025

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ರಾಜ್ಯದಲ್ಲಿ ಶಕ್ತಿ ಯೋಜನೆ ಪ್ರಾರಂಭವಾದ ದಿನದಿಂದ ಇಲ್ಲಿಯವರೆಗೂ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೆ.ಕೆ.ಆರ್.ಟಿ.ಸಿ.ಯ ಸಾರಿಗೆಯಲ್ಲಿ ಎಷ್ಟು ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿರುತ್ತಾರೆ; ಒಂದು ದಿನದ ಮೊತ್ತ ಎಷ್ಟು; (ವಿವರ ನೀಡುವುದು)</td><td>ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಶಕ್ತಿ ಯೋಜನೆ ಜಾರಿಗೆ ಬಂದ ದಿನಾಂಕ:11.6.2023 ರಿಂದ ಫೆಬ್ರುವರಿ-25ರ ಅಂತ್ಯದವರೆಗೆ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರಯಾಣಿಸಿದ ಮಹಿಳಾ ಪ್ರಯಾಣಿಕರ ಸಂಖ್ಯೆ ಹಾಗೂ ಜಿಲ್ಲಾವಾರು ಸರಾಸರಿ ಪ್ರತಿ ದಿನ ಉಂಟಾಗುತ್ತಿರುವ ವೆಚ್ಚದ ವಿವರ ಕೆಳಗಿನಂತಿದೆ:-
<table>
<tr><th>ಜಿಲ್ಲೆ</th><th>ಪ್ರಯಾಣಿಸಿದ ಒಟ್ಟು ಮಹಿಳಾ ಪ್ರಯಾಣಿಕರ ಸಂಖ್ಯೆ (ಲಕ್ಷಗಳಲ್ಲಿ)</th><th>ಸರಾಸರಿ ಪ್ರತಿ ದಿನದ ವೆಚ್ಚದ ವಿವರ (ರೂ.ಲಕ್ಷಗಳಲ್ಲಿ)</th></tr>
<tr><td>ಕಲಬುರಗಿ</td><td>1173.79</td><td>61.62</td></tr>
<tr><td>ಯಾದಗಿರಿ</td><td>409.10</td><td>23.51</td></tr>
<tr><td>ಒಟ್ಟು</td><td>1582.89</td><td>85.13</td></tr>
</table>
</td></tr>
<tr><td>ಆ.</td><td>ಕೆ.ಕೆ.ಆರ್.ಟಿ.ಸಿ ಸಂಸ್ಥೆಗೆ ಎಷ್ಟು ಪ್ರಮಾಣದ ಮೊತ್ತವನ್ನು ಸರ್ಕಾರವು ನೀಡಬೇಕಾಗಿದ್ದು, ಇದರಲ್ಲಿ ಎಷ್ಟು ಮೊತ್ತ ನೀಡಿದೆ; ಎಷ್ಟು ಬಾಕಿ ಉಳಿಸಿಕೊಂಡಿದೆ; ಬಾಕಿ ಉಳಿಸಿಕೊಳ್ಳಲು ಕಾರಣಗಳೇನು; (ವಿವರ ನೀಡುವುದು)</td><td>ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಶಕ್ತಿ ಯೋಜನೆಯಡಿ ದಿನಾಂಕ:11.6.2023 ರಿಂದ ಫೆಬ್ರುವರಿ-25 ರ ಅಂತ್ಯದ ವರೆಗೆ ಮಹಿಳಾ ಪ್ರಯಾಣಿಕರ ಪ್ರಯಾಣದಿಂದ ರೂ.199398.58 ಲಕ್ಷದಷ್ಟು ವೆಚ್ಚ ಉಂಟಾಗಿರುತ್ತದೆ. ಈ ಪೈಕಿ ರೂ.157467.01 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು, ರೂ.41931.57 ಲಕ್ಷ ಅನುದಾನ ಬಾಕಿ ಉಳಿದಿರುತ್ತದೆ.<br><br>ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವನ್ನು ಆರ್ಥಿಕವಾಗಿ ಪ್ರಬಲಗೊಳಿಸಲು ಕೈಗೊಂಡಿರುವ ಕ್ರಮಗಳು ಕೆಳಕಂಡಂತಿದೆ:-<br><br>• ಡೀಸೆಲ್ ತೈಲ ಬೆಲೆ ಹೆಚ್ಚಳದೊಂದಿಗೆ ಸಿಬ್ಬಂದಿ ವೆಚ್ಚ, ವಾಹನ ಬಿಡಿ ಭಾಗಗಳ ವೆಚ್ಚ ಒಳಗೊಂಡಂತೆ ಒಟ್ಟು ಕಾರ್ಯಾಚರಣೆ ವೆಚ್ಚ ಹೆಚ್ಚಾಗಿ ಸಂಸ್ಥೆಗೆ ಹೆಚ್ಚಿನ ಆರ್ಥಿಕ ಹೊರೆಯುಂಟಾಗಿದ್ದ ಕಾರಣ ದಿನಾಂಕ 04/05-01-2025 ರಿಂದ ಜಾರಿಗೆ ಬರುವಂತೆ ಬಸ್ ಪ್ರಯಾಣ ದರವನ್ನು ಶೇಕಡ 15ರಷ್ಟು ಪರಿಷ್ಕರಣೆ ಮಾಡಲಾಗಿದೆ.</td></tr>
</table>

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | • ಸಂಸ್ಥೆಗೆ ಹೊಸ ಬಸ್‌ಗಳ ಖರೀದಿಗಾಗಿ 2023-24ನೇ ಸಾಲಿನಲ್ಲಿ ನಿಗಮಕ್ಕೆ ರೂ.100.00 ಕೋಟಿಗಳ ವಿಶೇಷ ಬಂಡವಾಳ ಅನುದಾನವನ್ನು ಒದಗಿಸಲಾಗಿದೆ.<br><br>• ಸಂಸ್ಥೆಯು ನವೆಂಬರ್–24ರ ಅಂತ್ಯಕ್ಕೆ ಬಾಕಿ ಉಳಿಸಿಕೊಂಡಿರುವ ಶಾಸನಬದ್ಧ ಪಾವತಿಯಾದ ಭವಿಷ್ಯ ನಿಧಿ ಹಾಗೂ ಇಂಧನದ ಬಾಕಿ ಮೊತ್ತ ಪಾವತಿಸಲು ರೂ.141.00 ಕೋಟಿ ಮೊತ್ತದ ಸಾಲವನ್ನು ಸರ್ಕಾರದ ಖಾತರಿ/ಗ್ಯಾರಂಟಿಯೊಂದಿಗೆ ಹಣಕಾಸು ಸಂಸ್ಥೆಗಳಿಂದ ಪಡೆಯಲು ಅನುಮೋದನೆ ನೀಡಿದೆ.<br><br>• ಸಂಸ್ಥೆಗೆ ದಿನಾಂಕ:01.01.2020ರಿಂದ ದಿನಾಂಕ:28.02.2023 ರವರೆಗಿನ ಅವಧಿಯಲ್ಲಿ ಸೇವಾವಿಮುಕ್ತಿ ಹೊಂದಿದ ಅಧಿಕಾರಿ/ನೌಕರರಿಗೆ ದಿನಾಂಕ:01.01.2020ರ ಪರಿಷ್ಕೃತ ವೇತನ ಶ್ರೇಣಿಯನ್ವಯ ಪಾವತಿಸಬೇಕಾದ ಉಪಧನ ಹಾಗೂ ಗಳಿಕೆ ರಜೆ ನಗದೀಕರಣದ ವ್ಯತ್ಯಾಸ ಮೊತ್ತದ ಪಾವತಿಗಾಗಿ ಒಟ್ಟು ರೂ.35.75 ಕೋಟಿಗಳನ್ನು ಬಿಡುಗಡೆಗೊಳಿಸಿದೆ.<br><br>• ಸಂಸ್ಥೆಯ ನಗದು ಕೊರತೆಯನ್ನು ನಿಭಾಯಿಸಲು 2023-24ನೇ ಸಾಲಿನಲ್ಲಿ ನಿಗಮಗಳು ಸರ್ಕಾರಕ್ಕೆ ಪಾವತಿ ಮಾಡಬೇಕಾದ ಮೋಟಾರು ವಾಹನ ತೆರಿಗೆ ರೂ.114.16 ಕೋಟಿಗಳ ಪಾವತಿಯಿಂದ ವಿನಾಯಿತಿಯನ್ನು ನೀಡಿರುತ್ತದೆ ಹಾಗೂ 2024-25ನೇ ಸಾಲಿನಲ್ಲಿ ನಿಗಮಗಳು ಸರ್ಕಾರಕ್ಕೆ ಪಾವತಿಸಬೇಕಾದ ಮೋಟಾರು ವಾಹನ ತೆರಿಗೆ ಮೊತ್ತ ರೂ.108.36 ಕೋಟಿಗಳನ್ನು ಪುಸ್ತಕ ಹೊಂದಾಣಿಕೆ ಮಾಡಲು ಅನುಮೋದನೆ ನೀಡಿದೆ. |
| ಇ. | ಸಕಾಲದಲ್ಲಿ ಶಕ್ತಿ ಯೋಜನೆಯ ಹಣವನ್ನು ಸಂಸ್ಥೆಗೆ ಪಾವತಿಸಲು ವಿಳಂಬವಾದಲ್ಲಿ ಸಿಬ್ಬಂದಿಯ ವೇತನಕ್ಕೆ ಸಮಸ್ಯೆಯಾಗದಂತೆ ಸಂಸ್ಥೆಯು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಪ್ರಸ್ತುತ ಶಕ್ತಿ ಯೋಜನೆಯ ಮೊತ್ತವನ್ನು ಒಂದು ತಿಂಗಳ ಮುಂಚಿತವಾಗಿಯೇ ನಿಗಮಕ್ಕೆ ಬಿಡುಗಡೆ ಮಾಡುತ್ತಿರುವುದರಿಂದ ಸಕಾಲದಲ್ಲಿ ಸಿಬ್ಬಂದಿಗಳಿಗೆ ವೇತನ ಪಾವತಿಸಲು ಇಲ್ಲಿಯವರೆಗೆ ಯಾವುದೇ ವಿಳಂಬ ಮತ್ತು ಸಮಸ್ಯೆಯಾಗಿರುವುದಿಲ್ಲ. |

ಸಂಖ್ಯೆ: ಟಿಡಿ 44 ಟಿಸಿಕ್ಯೂ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು